**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. ರವರು ನಿಯಮ 72ರಡಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ**

**ಪ್ರಶ್ನೆ:** ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಡಿಕೆ, ಕೋಕೋ ಮತ್ತು ಮೆಣಸು ಬೆಳೆಗಳಿಗೆ ಹವಾಮಾನ ಆಧಾರಿತ ಬೆಳೆ ವಿಮೆ ಸೌಲಭ್ಯವನ್ನು ಪ್ರಸ್ತುತ ವರ್ಷಕ್ಕೆ ಕಲ್ಪಿಸಲು ಬೆಳೆಗಾರರಿಂದ ನಿಗದಿಯಾದ ಬೆಳೆ ವಿಮೆ ಕಂತನ್ನು ಪಡೆದು ಹವಾಮಾನ ಆಧಾರಿತ ಬೆಳೆ ವಿಮೆ ಸೌಲಭ್ಯವನ್ನು ಕಲ್ಪಿಸಲು ಈಗಾಗಲೇ ಕ್ರಮ ವಹಿಸಬೇಕಾಗಿತ್ತು. ಆದರೇ ಈಗಾಗಲೇ ಜೂನ್ ತಿಂಗಳು ಅಂತ್ಯವಾಗಿದ್ದರೂ, ಹವಾಮಾನ ಆಧಾರಿತ ಬೆಳೆ ವಿಮೆ ಸೌಲಭ್ಯವನ್ನು ಕಲ್ಪಿಸಲು ಇದುವರೆಗೂ ಯಾವುದೇ ಕ್ರಮ ಪ್ರಾರಂಭವಾಗಿರುವುದಿಲ್ಲ.ಈ ಹಿಂದೆ ಒಮ್ಮೆ ಬೆಳೆ ವಿಮೆ ಪಡೆದರೆ ಅದು 3 ವರ್ಷದ ಅವಧಿಗೆ ಚಾಲ್ತಿಯಲ್ಲಿರುತ್ತಿತ್ತು. ಆದರೆ ಕಳೆದ ವರ್ಷದಿಂದ ಕೇವಲ ಒಂದು (1) ವರ್ಷದ ಅವಧಿಗೆ ಮಾತ್ರ ಮಿತಿಗೊಳಿಸಲಾಗಿದೆ. ಸಂಕಷ್ಟದಲ್ಲಿರುವ ಬೆಳೆಗಾರರಿಗೆ ನೆರವಾಗುವ ದೃಷ್ಟಿಯಿಂದ ಈ ಹಿಂದೆ ಇದ್ದಂತೆ ಬೆಳೆ ವಿಮೆ ಅವಧಿಯನ್ನು 3 ವರ್ಷಗಳಿಗೆ ವಿಸ್ತರಿಸಲು ಯಾವುದೇ ಕ್ರಮ ವಹಿಸದೇ ಇರುವುದು ಹಾಗೂ ಬೆಳೆಗಾರರಿಂದ ನಿಗದಿಯಾದ ಬೆಳೆ ವಿಮೆ ಕಂತನ್ನು ಪಡೆದು ಅವರಿಗೆ ಹವಾಮಾನ ಆಧಾರಿತ ಬೆಳೆ ವಿಮೆ ಸೌಲಭ್ಯವನ್ನು ಕಲ್ಪಿಸಲು ಇದುವರೆಗೆ ಯಾವುದೇ ಕ್ರಮ ವಹಿಸದಿರುವ ಕಾರಣದಿಂದಾಗಿ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು.

**ಉತ್ತರ:** ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯಡಿಯಲ್ಲಿ ಪ್ರತಿ ವರ್ಷದಂತೆ 2024-25ನೇ ಸಾಲಿನಲ್ಲಿ ಬೆಳೆ ವಿಮೆ ಅನುಷ್ಠಾನಗೊಳಿಸಲು ದಕ್ಷಿಣ ಕನ್ನಡ ಜಿಲ್ಲೆ ಸೇರಿದಂತೆ ಜಿಲ್ಲಾವಾರು ಪ್ರಮುಖ ಬಹುವಾರ್ಷಿಕ ಮತ್ತು ವಾಣಿಜ್ಯ ತೋಟಗಾರಿಕೆ ಬೆಳೆಗಳಿಗೆ ದಿನಾಂಕ: 26-06-2024 ರಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ. ದಕ್ಷಿಣ ಕನ್ನಡ ಜಿಲ್ಲೆಗೆ ಸಂಬಂಧಿಸಿದಂತೆ ಅಡಿಕೆ ಮತ್ತು ಕರಿ ಮೆಣಸು ಬೆಳೆಗಳು ಒಳಗೊಂಡಿರುತ್ತವೆ. ನೊಂದಣಿಗೆ ಅಂತಿಮ ದಿನಾಂಕ:31.07.2024 ಆಗಿರುತ್ತದೆ. ಕೊಕೋ ಬೆಳೆಗೆ ಈ ಹಿಂದಿನಿಂದಲೂ ಬೆಳೆ ವಿಮೆ ಇರುವುದಿಲ್ಲ.

ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಯಡಿ ಟರ್ಮ್ ಶೀಟ್ ಪ್ರಕಾರ ಬೆಳೆ ರಿಸ್ಕ್ ಅವಧಿಯು ಗರಿಷ್ಟ ಒಂದು ವರ್ಷಕ್ಕೆ ಮಾತ್ರ ಇದ್ದು, ಪ್ರತಿ ವರ್ಷ ಬೆಳೆ ವಿಮೆಗೆ ನೊಂದಣಿ ಮಾಡಬೇಕಾಗಿರುತ್ತದೆ. ಪ್ರತಿ ವರ್ಷದಂತೆ 2024-25ನೇ ಸಾಲಿನಲ್ಲೂ ಒಂದು ವರ್ಷಕ್ಕೆ ದಿನಾಂಕ:26-06-2024 ರಂದು ಅಧಿಸೂಚನೆ ಹೊರಡಿಸಲಾಗಿರುತ್ತದೆ. ಅದರಂತೆ, ರೈತರ ನೊಂದಣಿಯು ಕಾರ್ಯ ಪ್ರಗತಿಯಲ್ಲಿರುತ್ತದೆ. ಈವರೆಗೆ ವಿವಿಧ ಬೆಳೆಗಳಿಗೆ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ 67798 ರಷ್ಟು ರೈತರು ವಿಮಾ ಕಂತು ಪಾವತಿಸಿ ನೊಂದಣಿ ಮಾಡಿಸಿಕೊಂಡಿರುತ್ತಾರೆ. ನೊಂದಣಿ ಕಾರ್ಯ ಮುಂದುವರೆದಿದ್ದು ಇನ್ನು ಹೆಚ್ಚಿನ ರೈತರು ನೊಂದಾಯಿಸುವ ನಿರೀಕ್ಷೆಯಿರುತ್ತದೆ.

HORTI 314 HGM 2024

**(ಎಸ್.ಎಸ್.ಮಲ್ಲಿಕಾರ್ಜುನ್)**
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು

ಎಸ್.ಎಸ್. ಮಲ್ಲಿಕಾರ್ಜುನ್
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು
ಹಾಗೂ ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರು